ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಕಾರ್ಮಿಕ ನಿಧಿಯ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

85(716) ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರ್ಮಿಕ ಇಲಾಖೆಯ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು /ಕಂಪನಿಗಳು, ಶಾಸನ ಬದ್ಧ ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಎಷ್ಟಿವೆ; ಅವು ಯಾವುವು; (ಇಲಾಖೆವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಡಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು; (ಯೋಜನೆವಾರು ವಿವರವಾದ ಮಾಹಿತಿ ನೀಡುವುದು)

(ಇ) ಕಾರ್ಮಿಕ ಇಲಾಖೆಯ ಅಧೀನದಲ್ಲಿರುವ ಕಾರ್ಮಿಕ ನಿಧಿ ಹಣವೆಷ್ಟು; ಇದನ್ನು ಖರ್ಚು ಮಾಡಲು ಇರುವ ಮಾರ್ಗಸೂಚಿಗಳಾವುವು; ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ; ಹಾಗೂ ಉಳಿದಿರುವ ಹಣವೆಷ್ಟು;

(ಈ) ಕಾರ್ಮಿಕ ಸಹಾಯ ಹಸ್ತ ಯೋಜನೆ ಜಾರಿಯಲ್ಲಿದೆಯೇ; ಇದರ ರೂಪು ರೇಷೆಗಳೇನು; ಈ ಸಂಬಂಧ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ; ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಗೆ ನೇಮಕ ಮಾಡಿಕೊಂಡಿರುವವರ ಹೆಸರು, ವಿಳಾಸದೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು;

(ಉ) ಇವರಿಗೆ ಸರ್ಕಾರವು ನೀಡುತ್ತಿರುವ ಸಹಾಯ/ಪ್ರೋತ್ಸಾಹ ಧನವೆಷ್ಟು ?